# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1318
2) ಸದಸ್ಯರ ಹೆಸರು : ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)
3) ಉತ್ತರಿಸಬೇಕಾದ ದಿನಾಂಕ : 19-03-2025
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮೀನುಗಾರಿಕೆ ಮಾಡುವ ಮಹಿಳೆಯರ ಸಹಕಾರ ಸಂಘಗಳು ಎಷ್ಟಿವೆ; ಈ ಸಂಘಗಳಿಗೆ ಸಾಲ ಸೌಲಭ್ಯಗಳನ್ನು ನೀಡ ಲಾಗುತ್ತಿದೆಯೇ; | ರಾಜ್ಯದಲ್ಲಿ ಒಟ್ಟು 66 ಮಹಿಳಾ ಮೀನುಗಾರರ ಸಹಕಾರ ಸಂಘಗಳಿವೆ. ಈ ಸಂಘಗಳಿಗೆ ಹಾಗೂ ಇತರೆ ಮೀನುಗಾರರ ಸಹಕಾರ ಸಂಘಗಳಲ್ಲಿರುವ ಮಹಿಳಾ ಮೀನುಗಾರರಿಗೆ ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/ಇ-121/ಮೀಇಯೋ/2023 ದಿನಾಂಕ: 06-09-2023 ರ ರೀತ್ಯಾ ಆರ್ಥಿಕ ಸ್ವಾವಲಂಬನೆ ಹಾಗೂ ವಹಿವಾಟು ವಿಸ್ತರಣೆಗೆ ನೆರವಾಗಲು ವಾಣಿಜ್ಯ ಬ್ಯಾಂಕ್ / ಪ್ರಾದೇಶಿಕ ಬ್ಯಾಂಕ್ ಗಳ ಮುಖಾಂತರ ಶೂನ್ಯ ಬಡ್ಡಿದರದಲ್ಲಿ ರೂ. 50,000-00 ರಿಂದ 3,00,000-00 ಗಳವರೆಗೆ ಸಾಲ ಸೌಲಭ್ಯವನ್ನು ನೀಡಲಾಗುತ್ತಿದೆ. |
| ಆ) | ಮೀನುಗಾರಿಕೆ ಮಹಿಳೆಯರಿಗೆ ಸ್ವಯಂ ಉದ್ಯೋಗ ಮಾಡಲು ನೀಡುವ ಯೋಜನೆಗಳು ಯಾವುವು; | ಮೀನುಗಾರಿಕೆ ಇಲಾಖೆಯಿಂದ ಮಹಿಳೆಯರಿಗೆ ಸ್ವಯಂ ಉದ್ಯೋಗ ಮಾಡಲು ಅನುಷ್ಠಾನಗೊಳಿಸುತ್ತಿರುವ ವಿಶೇಷ ಯೋಜನೆಗಳ ವಿವರ ಈ ಕೆಳಗಿನಂತಿವೆ:<br><br>**1) ವಾಣಿಜ್ಯ ಬ್ಯಾಂಕುಗಳಿಗೆ ವ್ಯತ್ಯಾಸದ ಬಡ್ಡಿ ಮರುಪಾವತಿ**<br><br>ಮೀನುಗಾರಿಕೆ ಚಟುವಟಿಕೆ ಕೈಗೊಳ್ಳಲು ಮಹಿಳಾ ಮೀನುಗಾರರಿಗೆ ಶೂನ್ಯ ಬಡ್ಡಿದರದಲ್ಲಿ ರೂ.50,000 ಗಳವರೆಗೆ ವಾಣಿಜ್ಯ/ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡಲಾಗುತ್ತಿದ್ದ ಸಾಲದ ಮಿತಿಯನ್ನು 2023-24ನೇ ಸಾಲಿನಿಂದ ರೂ.50,000/-ಗಳಿಂದ ರೂ.3,00,000/- ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**2) PMMSY - ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)**<br><br>ಈ ಯೋಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನು ಮಾರುಕಟ್ಟೆಗಳು ಮತ್ತು ಮಾರಾಟ ಮೂಲಸೌಕರ್ಯಗಳಿಗೆ ಸಹಾಯಧನ ನೀಡಲಾಗುತ್ತಿದೆ.<br><br>ಸದರಿ ಯೋಜನೆಯಡಿ ಎಲ್ಲಾ ವರ್ಗದ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.60ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.<br><br>ಇದಲ್ಲದೇ, ಮೀನುಗಾರಿಕೆ ಇಲಾಖೆಯಿಂದ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದ್ದು, ಸದರಿ ಯೋಜನೆಗಳ ಪ್ರಯೋಜನವನ್ನು ಮಹಿಳಾ ಮೀನುಗಾರರು ಸಹ ಪಡೆಯುತ್ತಿರುತ್ತಾರೆ. ಅಂತಹ ಯೋಜನೆಗಳ ವಿವರ ಕೆಳಕಂಡಂತಿದೆ:<br><br>1) ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು<br><br>• ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ (ರಾಜ್ಯ ಹಾಗೂ ಜಿಲ್ಲಾ ವಲಯ).<br><br>• ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ .<br><br>• ಮಂಜುಗಡ್ಡೆ ಸ್ಥಾವರಗಳು ಬಳಸುವ ವಿದ್ಯುತ್ ಮೇಲೆ ಸಹಾಯಧನ. |

<table>
<tr><td></td><td></td><td>2) ಸಾಂಪ್ರದಾಯಿಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು.<br>3) ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ ಮಾರಾಟ ತೆರಿಗೆ ಮರುಪಾವತಿ.<br>4) ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು.<br>5) ವಿದ್ಯಾನಿಧಿ ಯೋಜನೆ (ಮೀನುಗಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ ಪಾವತಿ).<br>6) ಮತ್ಸ್ಯಾಶ್ರಯ ಯೋಜನೆ.<br>7) ಕರಾವಳಿ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ.<br>8) ಸಾಮೂಹಿಕ ವಿಮಾ ಯೋಜನೆ.<br>9) ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ.</td></tr>
<tr><td>ಇ)</td><td>ಮೀನುಗಾರಿಕೆಯಲ್ಲಿ ಮಹಿಳೆಯರು ಯಾವ ವಿಧವಾದ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದಾರೆ;</td><td>ಮೀನುಗಾರಿಕೆಯಲ್ಲಿ ಮಹಿಳೆಯರು ಮೀನುಗಳನ್ನು ಬೋಟುಗಳಿಂದ ಇಳಿಸುವುದು ಮತ್ತು ವಾಹನಗಳಿಗೆ ಲೋಡ್ ಮಾಡುವುದು, ಮೀನುಗಳನ್ನು ಒಣಗಿಸುವ ಮತ್ತು ಮೀನಿನ ಮೌಲ್ಯ ವರ್ಧಿತ ಉತ್ಪನ್ನಗಳನ್ನು ತಯಾರಿಸುವುದು, ಮೀನುಗಳನ್ನು ಸ್ವಚ್ಛಗೊಳಿಸಿ ಸಾಗಾಣಿಕೆಗೆ ತಯಾರಿಸುವುದು, ಮಂಜುಗಡ್ಡೆ ಕಾರ್ಖಾನೆಗಳಲ್ಲಿ ಸಹಾಯಕರಾಗಿ ಮತ್ತು ಮೀನು ಮಾರಾಟ ಮಾಡುವುದರಲ್ಲಿ ತೊಡಗಿಸಿಕೊಂಡಿರುತ್ತಾರೆ.</td></tr>
<tr><td>ಈ)</td><td>ಸಮುದ್ರದಲ್ಲಿ ಮೀನು ಹಿಡಿಯುವ ಕಾರ್ಯ ಗಳಲ್ಲಿ ಮಹಿಳೆಯರ ಭಾಗವಹಿಸುವಿಕೆ ಶೇಕಡ ಎಷ್ಟು ಪ್ರಮಾಣವಿದೆ;</td><td>ಸಮುದ್ರದಲ್ಲಿ ಮೀನು ಹಿಡಿಯುವ ಕಾರ್ಯಗಳಲ್ಲಿ ಮಹಿಳೆಯರ ಭಾಗವಹಿಸುವಿಕೆ ಶೂನ್ಯವಾಗಿರುತ್ತದೆ.</td></tr>
<tr><td>ಉ)</td><td>ಮೀನುಗಾರಿಕೆಯಲ್ಲಿ ಮಹಿಳೆಯರು ಸ್ವಯಂ ಬೋಟ್ ಹೊಂದಿದ್ದಾರೆಯೇ; ಹೊಂದಿದ್ದಲ್ಲಿ, ಸ್ವಯಂ ಬೋಟ್ ಹೊಂದಿರುವ ಮಹಿಳೆಯರ ಸಂಖ್ಯೆ ಎಷ್ಟು?<br>(ಮಾಹಿತಿ ನೀಡುವುದು)</td><td>ಮೀನುಗಾರಿಕೆಯಲ್ಲಿ ಮಹಿಳೆಯರು ಸ್ವಯಂ ಬೋಟ್ ಹೊಂದಿರುತ್ತಾರೆ. ವಿವರ ಈ ಕೆಳಕಂಡಂತಿರುತ್ತದೆ.<br><table><tr><th>ಕ್ರ. ಸಂ</th><th>ಜಿಲ್ಲೆ ಹೆಸರು</th><th>ಸ್ವಯಂ ಬೋಟ್ ಹೊಂದಿರುವ ಮಹಿಳೆಯರ ಸಂಖ್ಯೆ</th></tr><tr><td>1</td><td>ಮಂಗಳೂರು</td><td>1006</td></tr><tr><td>2</td><td>ಕಾರವಾರ</td><td>1600</td></tr><tr><td>3</td><td>ಉಡುಪಿ</td><td>1919</td></tr></table></td></tr>
</table>

ಸಂಖ್ಯೆ: ಪಸಂಮೀ ಇ-74 ಮೀಇಯೋ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು